ನಮ್ಮ ಮಹಾನಗರ

ವಿಜಯ ಕರ್ನಾಟಕ

June 24, 2014
Hubli

www.vijaykarnataka.com

# ಕ್ರೆಡಿಟ್ ರೇಟಿಂಗ್‌ನಿಂದ ತ್ವರಿತ ಅಭಿವೃದ್ಧಿ

■ **ವಿಕ ಸುದ್ದಿಲೋಕ**, ಹುಬ್ಬಳ್ಳಿ

ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಉದ್ಯಮಗಳ ಇಲಾಖೆಯಿಂದ ಮಾನ್ಯತೆ ಪಡೆದ ಸೂಕ್ಷ್ಮ ಹಾಗೂ ಸಣ್ಣ ಉದ್ಯಮಿಗಳು ಕೈಗಾರಿಕೆ ಕ್ಷೇತ್ರದಲ್ಲಿ ಕ್ರೆಡಿಟ್ ರೇಟಿಂಗ್ ವ್ಯವಸ್ಥೆ ಅಳವಡಿಸಿಕೊಂಡರೆ ಜಾಗತಿಕ ಮಾರುಕಟ್ಟೆಯಲ್ಲಿ ತ್ವರಿತವಾಗಿ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಬ್ರಿಕ್ ವರ್ಕ್ ರೇಟಿಂಗ್ ಫೌಂಡೇಶನ್‌ನ ವ್ಯವಸ್ಥಾಪಕ ನಿರ್ದೇಶಕ ವಿವೇಕ ಕುಲಕರ್ಣಿ ಅಭಿಪ್ರಾಯಪಟ್ಟರು.

ಬೆಂಗಳೂರಿನ ಬ್ರಿಕ್‌ವರ್ಕ್ ರೇಟಿಂಗ್ ಏಜೆನ್ಸಿ ವತಿಯಿಂದ 'ಬ್ಯಾಂಕ್ ಲೋನ್ ಹಾಗೂ ಸಣ್ಣ ಹಾಗೂ ಮಧ್ಯಮ ಉದ್ಯಮ ರೇಟಿಂಗ್' ವಿಷಯದ ಕುರಿತು ನಗರದಲ್ಲಿ ಮಂಗಳವಾರ ನಡೆದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರೇಟಿಂಗ್ ವ್ಯವಸ್ಥೆ ಅಳವಡಿಸಿಕೊಂಡರೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಸಬ್ಸಿಡಿ ಬಡ್ಡಿ ಸಾಲ ದೊರೆಯುತ್ತಿದ್ದು, ಉದ್ಯಮವನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಈ ಹಣ ನೆರವಾಗುತ್ತದೆ. ಇನಿಷಿಯಲ್ ಪಬ್ಲಿಕ್ ಆಫರಿಂಗ್, ರಿಯಲ್ ಎಸ್ಟೇಟ್, ವೈದ್ಯಕೀಯ, ಶಿಕ್ಷಣ ಸಂಸ್ಥೆಗಳು ಹಾಗೂ ಸರಕಾರೇತರ ಸಂಸ್ಥೆ ಕ್ಷೇತ್ರಗಳಲ್ಲಿ ವಿಪರೀತ ಸ್ಪರ್ಧೆ ಏರ್ಪಟ್ಟಿದೆ. ಹೀಗಾಗಿ ಈ ಎಲ್ಲ ಸಂಸ್ಥೆಗಳು ಗ್ರೇಡಿಂಗ್ ಪದ್ಧತಿ ಅಳವಡಿಸಿಕೊಂಡರೆ ಜಾಗತಿಕ ಮನ್ನಣೆ ಪಡೆಯಲು ಸಾಧ್ಯವಾಗುತ್ತದೆ. ಗುಣಮಟ್ಟ ಸೇವೆ ಹಾಗೂ ಮೂಲ ಸೌಕರ್ಯದ ಆಧಾರದ ಮೇಲೆ ಕೇಂದ್ರ ಸರಕಾರದಿಂದ ಮಾನ್ಯತೆ ಪಡೆದ ಏಜೆನ್ಸಿಗಳು ಸಮೀಕ್ಷೆ ನಡೆಸಿ ಗ್ರೇಡ್‌ಗಳನ್ನು ನೀಡುತ್ತವೆ. ಈ ಗ್ರೇಡ್ ಆಧಾರದ ಮೇಲೆ ಸರಕಾರ ಹಾಗೂ ಇತರ ಸಂಘ ಸಂಸ್ಥೆಗಳಿಂದ ನೆರವು ಪಡೆಯಬಹುದು ಎಂದರು.

ಬ್ರಿಕ್‌ವರ್ಕ್ ರೇಟಿಂಗ್ ಸಂಸ್ಥೆಯು ನ್ಯಾಷನಲ್ ಸ್ಮಾಲ್ ಇಂಡಸ್ಟ್ರೀಜ್ ಕಾರ್ಪೊರೇಷನ್, ಸೆಕ್ಯುರಿಟೀಸ್ ಆ್ಯಂಡ್ ಎಕ್ಸ್‌ಚೇಂಜ್ ಆಫ್ ಇಂಡಿಯಾ ಹಾಗೂ ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಮಾನ್ಯತೆ ಪಡೆದಿದ್ದು, ಕಳೆದ ಕೆಲವು ವರ್ಷಗಳಿಂದ ಗುಣಮಟ್ಟದ ಸೇವೆ ನೀಡುತ್ತಿದೆ. ದೇಶದ 160 ನಗರಗಳಲ್ಲಿ ಬ್ರಿಕ್‌ವರ್ಕ್ ಕಾರ್ಯ ನಿರ್ವಹಿಸುತ್ತಿದ್ದು, ಒಂಬತ್ತು ನಗರಗಳಲ್ಲಿ ಶಾಖೆಗಳನ್ನು ಹೊಂದಿದೆ. ಬ್ಯಾಂಕಿಂಗ್ ಹಾಗೂ ಲೆಕ್ಕಪರಿಶೋಧನೆ ಕ್ಷೇತ್ರದಲ್ಲಿ ಅನುಭವ ಪಡೆದ ವ್ಯಕ್ತಿಗಳು ರೇಟಿಂಗ್ ಹಾಗೂ ಗ್ರೇಡಿಂಗ್ ತಂಡದಲ್ಲಿ ಕಾರ್ಯನಿರ್ವಹಿಸುತ್ತಾರೆ.

ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ವಸಂತ ಲದವಾ ಮಾತನಾಡಿ, ರಫ್ತು ಹಾಗೂ ಉದ್ಯೋಗ ಸೃಷ್ಟಿಯಲ್ಲಿ ಸಣ್ಣ ಹಾಗೂ ಮಧ್ಯಮ ಕೈಗಾರಿಕೆಗಳ ಕೊಡುಗೆ ಅಪಾರವಾಗಿದೆ. ಆದರೂ ಈ ಉದ್ಯಮಗಳ ಅಭಿವೃದ್ಧಿಗೆ ಬ್ಯಾಂಕ್‌ಗಳಿಂದ ನಿರೀಕ್ಷಿತ ಪ್ರಮಾಣದಲ್ಲಿ ಪ್ರೋತ್ಸಾಹ ದೊರೆಯುತ್ತಿಲ್ಲ. ಕ್ರೆಡಿಟ್ ರೇಟಿಂಗ್ ವ್ಯವಸ್ಥೆ ಅಳವಡಿಸಿಕೊಂಡರೆ ಆರ್‌ಬಿಐ ಸಬ್ಸಿಡಿ ಬಡ್ಡಿಯಲ್ಲಿ ಸಾಲ ನೀಡಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ಅಲ್ಲದೇ ಜಾಗತಿಕ ಮಾರುಕಟ್ಟೆಯಲ್ಲಿ ಬೆಳವಣಿಗೆ ಹೊಂದಲು ಕ್ರೆಡಿಟ್ ರೇಟಿಂಗ್ ಹಾಗೂ ಗ್ರೇಡ್ ಪದ್ಧತಿ ಪೂರಕವಾಗಿದೆ ಎಂದು ಅಭಿಪ್ರಾಯಪಟ್ಟರು.

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಸಹಾಯಕ ಪ್ರಧಾನ ವ್ಯವಸ್ಥಾಪಕ ಬಿ.ಸಿ.ರಮೇಶ, ಕೆನರಾ ಬ್ಯಾಂಕ್‌ನ ಸಹಾಯಕ ಪ್ರಧಾನ ವ್ಯವಸ್ಥಾಪಕ ಎ.ಎಂ.ಮಾಗೇರ್, ಯುನಿಯನ್ ಬ್ಯಾಂಕ್‌ನ ಸಹಾಯಕ ಪ್ರಧಾನ ವ್ಯವಸ್ಥಾಪಕ ವಿ.ಎಂ. ಮರಡ್ಡಿ, ಎಸ್‌ಐಆರ್‌ಸಿ ಹುಬ್ಬಳ್ಳಿ ಬ್ರಾಂಚ್‌ನ ಅಧ್ಯಕ್ಷ ಹಿತೇಶಕುಮಾರ್ ಮೋದಿ ಸೇರಿದಂತೆ ಉದ್ಯಮಿಗಳು, ಬ್ಯಾಂಕ್ ಸಿಬ್ಬಂದಿ ಹಾಗೂ ಲೆಕ್ಕ ಪರಿಶೋಧಕರು ಉಪಸ್ಥಿತರಿದ್ದರು.

ವಿಕ ಚಿತ್ರಲೋಕ




**ಹುಬ್ಬಳ್ಳಿಯಲ್ಲಿ ಮಂಗಳವಾರ ನಡೆದ ಬ್ಯಾಂಕ್ ಲೋನ್ ಮತ್ತು ಎಸ್‌ಎಂಇ ರೇಟಿಂಗ್ಸ್ ಕಾರ್ಯಾಗಾರದಲ್ಲಿ ಬ್ರಿಕ್ ವರ್ಕ್ ರೇಟಿಂಗ್ ಫೌಂಡೇಶನ್‌ನ ವ್ಯವಸ್ಥಾಪಕ ನಿರ್ದೇಶಕ ವಿವೇಕ ಕುಲಕರ್ಣಿ ಮಾತನಾಡಿದರು.**